**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ:196:ಆರ್‌ಆರ್‌ಸಿ:2013.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:31-10-2013.

**ಸುತ್ತೋಲೆ**

ವಿಷಯ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ವತಿಯಿಂದ ಅನುಷ್ಠಾನಗೊಳ್ಳುವ ಎಲ್ಲಾ ರಸ್ತೆ ಸಂಬಂಧಿತ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ವ್ಯಾಪ್ತಿಗೊಳಪಟ್ಟು ಕಾರ್ಯ ನಿರ್ವಹಿಸುವ ಕುರಿತು.

---

ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ವತಿಯಿಂದ ಪಿಎಂಜಿಎಸ್‌ವೈ ಮತ್ತು ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿಯಲ್ಲಿ ರಸ್ತೆ ಮತ್ತು ಸೇತುವೆಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡುತ್ತಿರುವುದು ಸರಿಯಷ್ಟೆ. ಈ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಕೆಆರ್‌ಆರ್‌ಡಿಎ ಯೋಜನಾ ವಿಭಾಗದ ಅಧಿಕಾರಿಗಳು, ತಾಲ್ಲೂಕು ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳು ಅನುಷ್ಠಾನ ಮಾಡುತ್ತಿದ್ದು, ಈವರೆವಿಗೂ ಅಧೀಕ್ಷಕ ಇಂಜಿನಿಯರ್ ಮತ್ತು ರಾಜ್ಯ ಮಟ್ಟದಲ್ಲಿ ಮುಖ್ಯ ಕಾರ್ಯಾಚರಣಾಧಿಕಾರಿಗಳಿಗೆ ಪ್ರಗತಿಯ ವರದಿಯನ್ನು ಮಾಡುತ್ತಿದ್ದು ಇವರುಗಳು ಮೇಲುಸ್ತುವಾರಿ ಸಹ ಮಾಡುತ್ತಿರುವುದು ಸ್ವಯಂವೇದ್ಯ.

ಇನ್ನು ಮುಂದೆ ಜಿಲ್ಲಾ ಮಟ್ಟದ ಕೆಆರ್‌ಆರ್‌ಡಿಎ ಯೋಜನಾ ವಿಭಾಗದ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಉಪ ವಿಭಾಗಾಧಿಕಾರಿಗಳು ಯೋಜನೆಯ ಕಾಮಗಾರಿಗಳಿಗೆ ಸಂಬಂಧಿಸಿದ ಪ್ರಗತಿಯ ವರದಿಗಳನ್ನು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿಗಳಿಗೂ ಸಹ ವರದಿಸುವುದು ಮತ್ತು ಸಲ್ಲಿಸುವುದು ಹಾಗೂ ಕಾಮಗಾರಿಗಳ ಅನುಷ್ಠಾನದಲ್ಲಿ ಇವರುಗಳ ಸಲಹೆ ಸಹಕಾರ ಹಾಗೂ ಮಾರ್ಗದರ್ಶನಗಳನ್ನು ಪಡೆಯುವುದು.

ಮುಂದುವರೆದು ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಹಾಗೂ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯ ಕಾರ್ಯಕ್ರಮಗಳನ್ನು ನಿಯತವಾಗಿ ಪರಿವೀಕ್ಷಣೆ ಮಾಡುವುದು ಮತ್ತು ಪ್ರಗತಿಯನ್ನು ಪರಾಮರ್ಶಿಸುವುದು. ಅವಶ್ಯಕ ವರದಿಗಳನ್ನು ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ಸಂಸ್ಥೆಯ (ಕೆಆರ್‌ಆರ್‌ಡಿಎ) ಜಿಲ್ಲಾ ಮಟ್ಟದ ಯೋಜನಾ ವಿಭಾಗದ ಅಧಿಕಾರಿಗಳ ಕಾರ್ಯನಿರ್ವಹಣಾ ವರದಿಗಳನ್ನು ಇನ್ನು ಮುಂದೆ ಆಯಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು ವರದಿ ಮಾಡುವ ಅಧಿಕಾರಿಯಾಗಿ ವರದಿ ಮಾಡಲು ಸೂಚಿಸಿದೆ.

31/x/13

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಸುಗ್ರಾಯೋ & ಪಘಅಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.

2. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,ಬೆಂಗಳೂರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
5. ಇಲಾಖೆಯ ಎಲ್ಲಾ ನಿರ್ದೇಶಕರು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
6. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಕರ್ನಾಟಕ ನಿರ್ಮಾಣ ಭವನ, ಡಾ: ರಾಜ್‌ಕುಮಾರ್ ರಸ್ತೆ, ಯಶವಂತಪುರ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಕಟ್ಟಡ, ಬೆಂಗಳೂರು-20.
8. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
9. ಎಲ್ಲಾ ಪಂಚಾಯತ್ ರಾಜ್ ಇಂಜಿನಿರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರುಗಳಿಗೆ.
10. ಎಲ್ಲಾ ಕೆಆರ್‌ಆರ್‌ಡಿಎ ಯೋಜನಾ ವಿಭಾಗಗಳ ಜಿಲ್ಲಾ ಮಟ್ಟದ ಕಾರ್ಯಪಾಲಕ ಇಂಜಿನಿಯರುಗಳಿಗೆ / ತಾಲ್ಲೂಕು ಮಟ್ಟದ ಉಪ ವಿಭಾಗಾಧಿಕಾರಿಗಳಿಗೆ.
11. ಸಂಪಾದಕರು ಕರ್ನಾಟಕ ವಿಕಾಸ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು).
13. ರಕ್ಷಾ ಕಡತ / ಹೆಚ್ಚುವರಿ ಪ್ರತಿ.